ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ನ್ಯಾಯ ವಿಜ್ಞಾನ ಪ್ರಯೋಗಾಲಯದ ನೇಮಕಾತಿ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು) –

394 (241) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸಿ. ಎ. ಜಿ ವರದಿಯಲ್ಲಿ ನ್ಯಾಯ ವಿಜ್ಞಾನ ಪ್ರಯೋಗಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸೈಬರ್ ವಿಭಾಗದ ವರದಿ ನೀಡುವ ಅಧಿಕಾರಿಗಳು ಅರ್ಹ ವಿದ್ಯಾಭ್ಯಾಸವನ್ನು ಹೊಂದಿಲ್ಲ ಎಂಬುದಾಗಿ ವರದಿ ನೀಡಿದ್ದು, ಸದರಿ ಸಿಬ್ಬಂದಿಗಳು ಅರ್ಹ ವಿದ್ಯಾಭ್ಯಾಸವನ್ನು ಪೂರ್ಣಗೊಳಿಸಿರುತ್ತಾರೆಯೇ;

(ಆ) ಸದರಿ ಸಿಬ್ಬಂದಿಗಳು ಅರ್ಹ ಪೂರಕ ವಿದ್ಯಾಭ್ಯಾಸವನ್ನು ಯಾವಾಗ ಪೂರ್ಣಗೊಳಿಸಿರುತ್ತಾರೆ; ಸದರಿ ಸಿಬ್ಬಂದಿಗಳು ಸೈಬರ್ ವಿಭಾಗದ ವರದಿ ನೀಡುವ ಶಾಖೆಯಲ್ಲಿ ಎಂದಿನಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ? (ಹೆಸರಿನೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)